## ಸ್ವರ್ಣವಲ್ಲೀ ಶ್ರೀಗಳಿಂದ ಕಿರು ಹೊತ್ತಿಗೆ ಅನಾವರಣ

# ಭಗವದ್ಗೀತೆ ಅಭಿಯಾನಕ್ಕೆ ಚಾಲನೆ

ಪ್ರಜಾವಾಣಿ ವಾರ್ತೆ

ಸಿದ್ದಾಪುರ: ಭಗವದ್ಗೀತೆ ಅಭಿಯಾನದ ಅಂಗವಾಗಿ ಸ್ವರ್ಣವಲ್ಲೀ ಮಠದ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಮಂಗಳವಾರ ಪಟ್ಟಣದ ಶಿಕ್ಷಣ ಪ್ರಸಾರಕ ಸಮಿತಿಯ ಚೇತನಾ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಭಗವದ್ಗೀತೆಯ 10ನೇ ಅಧ್ಯಾಯ ವಿಭೂತಿಯೋಗದ ಕುರಿತು ವಿದ್ಯಾರ್ಥಿಗಳಿಗೆ ಪ್ರವಚನ ನೀಡಿದರು.

ನಂತರ ಶಿಕ್ಷಣ ಪ್ರಸಾರಕ ಸಮಿತಿಯ ಮತ್ತೊಂದು ಶಿಕ್ಷಣ ಕೇಂದ್ರ ಸಿ.ಇ.ಟಿ ಮತ್ತು ನೀಟ್ ಕೋಚಿಂಗ್ ನೀಡುವ ಪ್ರಸಿದ್ಧಿ ಇನ್‌ಸ್ಟಿಟ್ಯೂಟ್ ಆಫ್ ಕೋಚಿಂಗ್ ಇದರ ಕಿರು ಹೊತ್ತಿಗೆ ಅನಾವರಣ ಮಾಡಿದರು.

ಸಂಸ್ಥೆಯ ಅಧ್ಯಕ್ಷ ಡಾ.ಶಶಿಭೂಷಣ ವಿ.ಹೆಗಡೆ, ಧನ್ವಂತರಿ ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯೆ ರೂಪಾ ಭಟ್ಟ, ಕಾರ್ಯದರ್ಶಿ ಕೆ.ಐ. ಹೆಗಡೆ, ಕಾಲೇಜಿನ ಶೈಕ್ಷಣಿಕ ಮಾರ್ಗದರ್ಶಕ ಎಂ.ಎಸ್. ಭಟ್ಟ ಹಾಗೂ ಸಿದ್ಧಿವಿನಾಯಕ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯ ಮುಖ್ಯಶಿಕ್ಷಕ ಸಂತೋಷ ಹೆಗಡೆ ಇದ್ದರು.



ಸಿದ್ದಾಪುರದ ಶಿಕ್ಷಣ ಪ್ರಸಾರಕ ಸಮಿತಿಯ ಚೇತನಾ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯಲ್ಲಿ ಭಗವದ್ಗೀತೆ ಅಭಿಯಾನ ಕಾರ್ಯಕ್ರಮವನ್ನು ಸ್ವರ್ಣವಲ್ಲೀ ಮಠದ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಉದ್ಘಾಟಿಸಿದರು